All India Radio: Bangalore
Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

23.07.2025 2.30 PM

**<><><><>**

ಮುಖ್ಯಾಂಶಗಳು

- ಉಪರಾಷ್ಟ್ರಪತಿ ಹುದ್ದೆಗೆ ಚುನಾವಣಾ ಪ್ರಕ್ರಿಯೆ ಆರಂಭಿಸಿದ ಕೇಂದ್ರ ಚುನಾವಣಾ ಆಯೋಗ
- ರಾಜ್ಯದಲ್ಲಿ ಸೆಪ್ಟೆಂಬರ್ ೨೨ ರಿಂದ ಅಕ್ಟೋಬರ್ ೦೭ ರವರೆಗೆ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ನಡೆಸಲು ಸರ್ಕಾರ ತೀರ್ಮಾನ
- ಜಿಎಸ್‌ಟಿ ವಿರೋಧಿಸಿ ಬೆಂಗಳೂರಿನಲ್ಲಿ ಸಣ್ಣ ವ್ಯಾಪಾರಿಗಳಿಂದ ಪ್ರತಿಭಟನೆ - ಬೆಂಬಲ ಘೋಷಿಸಿದ ಬಿಜೆಪಿ
- ಅಕ್ರಮ ಆಸ್ತಿ ಸಂಪಾದನೆ ಹಿನ್ನೆಲೆ - ರಾಜ್ಯದ ವಿವಿಧೆಡೆ ಲೋಕಾಯುಕ್ತ ದಾಳಿ
- ಬೆಂಗಳೂರಿನಲ್ಲಿ ನಾಲ್ಕು ದಿನಗಳ ಕಾಲ ಕೇಂದ್ರ ಬುಡಕಟ್ಟು ವ್ಯವಹಾರಗಳ ಸಚಿವಾಲಯದಿಂದ ಆದಿಕರ್ಮಯೋಗಿ ತರಬೇತಿ

><><><><><><><><><

ಉಪರಾಷ್ಟ್ರಪತಿ ಹುದ್ದೆಗೆ ಜಗದೀಪ್ ಧನ್‌ಕರ್ ರಾಜೀನಾಮೆ ನೀಡಿದ ಹಿನ್ನೆಲೆಯಲ್ಲಿ ಚುನಾವಣಾ ಆಯೋಗ ಚುನಾವಣಾ ಪ್ರಕ್ರಿಯೆ ಪ್ರಾರಂಭಿಸುವುದಾಗಿ ಘೋಷಿಸಿದೆ. ಪೂರ್ವಸಿದ್ಧತಾ ಚಟುವಟಿಕೆಗಳು ಪೂರ್ಣಗೊಂಡ ಬಳಿಕ ಉಪರಾಷ್ಟ್ರಪತಿ ಚುನಾವಣೆಯ ವೇಳಾಪಟ್ಟಿಯನ್ನು ಸಾಧ್ಯವಾದಷ್ಟು ಬೇಗ ಪ್ರಕಟಿಸಲಾಗುವುದು ಎಂದು ತಿಳಿಸಿದೆ.ರಾಜ್ಯಸಭೆ ಮತ್ತು ಲೋಸಭೆಯ ಚುನಾಯಿತ ಮತ್ತು ನಾಮ ನಿರ್ದೇಶಿತ ಸಭೆಯನ್ನು ಒಳಗೊಂಡಿರುವ ಚುನಾವಣಾ ಕಾಲೇಜಿನ ಸಿದ್ಧತೆ ಮತ್ತು ಚುನಾವಣಾ ಅಧಿಕಾರಿ, ಹಾಗೂ ಸಹಾಯಕ ಚುನಾವಣಾ ಅಧಿಕಾರಿಗಳನ್ನು ಅಂತಿಮ ಗೊಳಿಸುವುದು, ಚುನಾವಣಾ ಸಾಮಾಗ್ರಿಗಳ ತಯಾರಿಕೆ ಸೇರಿದೆ ಎಂದು ಆಯೋಗ ಉಲ್ಲೇಖಿಸಿದೆ.ಅನಾರೋಗ್ಯದ ಹಿನ್ನೆಲೆಯಲ್ಲಿ ಜಗದೀಪ್ ಧನ್‌ಕರ್ ಜುಲೈ ೨೧ ರಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ತಮ್ಮ ರಾಜೀನಾಮೆ ಸಲ್ಲಿಸಿದ್ದರು.

><><><><><><><><><

ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಇಂದು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕುರಿತಾದ ಪೂರ್ವಭಾವಿ ಸಭೆ ನಡೆಯಿತು.ಸಭೆಯಲ್ಲಿ  ಹಿಂದುಳಿದ ವರ್ಗಗಳ ಆಯೋಗ, ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ನಡೆಸುವ ಕುರಿತಾಗಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದೆ. ಇದರಂತೆ ರಾಜ್ಯದ ಎಲ್ಲಾ ೭ ಕೋಟಿ ಜನರ ಸಮೀಕ್ಷೆ ನಡೆಸಲಾಗುವುದು. ಜಾತಿ ತಾರತಮ್ಯ ನಿವಾರಣೆ ಮಾಡುವುದು ಗಣತಿಯ ಮುಖ್ಯ ಉದ್ದೇಶ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.ರಾಜ್ಯದ ಪ್ರತಿಯೊಬ್ಬರ ಆರ್ಥಿಕ ಪರಿಸ್ಥಿತಿ, ಜಮೀನು ಇದೆಯೇ ಇಲ್ಲವೇ ಸೇರಿದಂತೆ ಸಮಗ್ರ ಸಮೀಕ್ಷೆ ನಡೆಯಬೇಕು. ಈ ಸಮೀಕ್ಷೆ ವರದಿ ಮುಂದಿನ ಬಜೆಟ್ ಸಿದ್ಧಪಡಿಸುವ ಸಂದರ್ಭದಲ್ಲಿ ಆಧಾರವಾಗಲಿದೆ. ಈ ಬಾರಿಯ ಸಮೀಕ್ಷೆ ದೇಶದಲ್ಲೇ ಮಾದರಿ ಸಮೀಕ್ಷೆಯಾಗಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಸೆಪ್ಟಂಬರ್ ೨೨ರಿಂದ ಅಕ್ಟೋಬರ್ ೭ ರವರೆಗೆ ೧೫ ದಿನಗಳ ಕಾಲ ಸಮೀಕ್ಷೆ ನಡೆಸಿ ಅಕ್ಟೋಬರ್ ಕೊನೆಯ ಒಳಗಾಗಿ ಸಮೀಕ್ಷೆ ವರದಿಯನ್ನು ಸಲ್ಲಿಸಬೇಕು ಎಂದು ಸೂಚಿಸಿದ್ದಾರೆ.  ತೆಲಂಗಾಣದಲ್ಲಿ ಕೈಗೊಳ್ಳಲಾಗಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಗಣತಿ ಕುರಿತು ಅಧ್ಯಯನ ನಡೆಸಲು ಮುಖ್ಯಮಂತ್ರಿ ಸೂಚನೆ ನೀಡಿದ್ದಾರೆ. ಸಮೀಕ್ಷೆ ಕಾರ್ಯದ ಮೇಲುಸ್ತುವಾರಿಗೆ ಉನ್ನತಮಟ್ಟದ ಸಮಿತಿ ರಚಿಸಲು ತಿರ್ಮಾನ ಕೈಗೊಳ್ಳಲಾಗಿದೆ.

><><><><><><><><><

ರಾಜ್ಯದಲ್ಲಿ ಸಣ್ಣ ವ್ಯಾಪಾರಿಗಳು ಹಾಗೂ ಅಂಗಡಿ ಮಾಲೀಕರಿಗೆ ಜಿಎಸ್‌ಟಿ ನೋಟಿಸ್ ಜಾರಿ ಮಾಡಿರುವುದನ್ನು ವಿರೋಧಿಸಿ ವ್ಯಾಪಾರಿಗಳು ಇಂದಿನಿಂದ ೩ ದಿನಗಳ ಕಾಲ ಪ್ರತಿಭಟನೆ ಆರಂಭಿಸಿದ್ದಾರೆ. ಶುಕ್ರವಾರ ಅಂಗಡಿ ಮುಂಗಟ್ಟು ಮುಚ್ಚಿ ಫ್ರೀಢಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಲು ನಿರ್ಧರಿಸಿದ್ದಾರೆ. ಜಿಎಸ್‌ಟಿ ನೋಟಿಸ್‌ಗಳನ್ನು ಹಿಂತೆಗೆದುಕೊಳ್ಳದಿದ್ದರೆ ಅನಿರ್ದಿಷ್ಟಾವಧಿ ಮುಷ್ಕರ ನಡೆಸಲು ವ್ಯಾಪಾರಿಗಳು ನಿರ್ಧರಿಸಿದ್ದಾರೆ.

><><><><><><><><><><

ರಾಜ್ಯದ ಸಣ್ಣ ವ್ಯಾಪಾರಿಗಳ ಹೋರಾಟಕ್ಕೆ ಬಿಜೆಪಿ ಸಂಪೂರ್ಣ ಬೆಂಬಲ ನೀಡಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ. ಬೆಂಗಲೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ರಾಜ್ಯ ಸರ್ಕಾರವು ವಾಣಿಜ್ಯ ತೆರಿಗೆ ಇಲಾಖೆಯಿಂದ ಬೀದಿಬದಿ ವ್ಯಾಪಾರಿಗಳು, ಮಧ್ಯಮ, ಸಣ್ಣ ಮತ್ತು ಅತಿ ಸಣ್ಣ ವ್ಯಾಪಾರಿಗಳಿಗೆ ನೋಟಿಸ್ ನೀಡುತ್ತಿದೆ ಎಂದು ಆರೋಪಿಸಿದ್ದಾರೆ. ಮಹಾರಾಷ್ಟ್ರವನ್ನು ಹಿಂದಿಕ್ಕಿ ಅತಿ ಹೆಚ್ಚು ಜಿಎಸ್‌ಟಿ ಸಂಗ್ರಹ ದಾಖಲಿಸಲು ನಡೆಸುತ್ತಿರುವ ಹುನ್ನಾರ ಎಂದು ದೂರಿದ್ದಾರೆ.  ವ್ಯಾಪಾರಿಗಳಿಗೆ ಈಗಾಗಲೇ ನೀಡಿರುವ ನೋಟಿಸನ್ನು ಹಿಂದಕ್ಕೆ ಪಡೆಯಬೇಕೆಂದು ಆಗ್ರಹಿಸಿದ್ದಾರೆ. ಇದೇ ವೇಳೆ ಧರ್ಮಸ್ಥಳದ ಕುರಿತು

ಪ್ರಶ್ನೆಗೆ ಉತ್ತರಿಸಿದ ಅವರು, ರಾಜ್ಯ ಸರ್ಕಾರ ಎಸ್‌ಐಟಿ ರಚಿಸಿದ್ದು ಶೀಘ್ರದಲ್ಲಿ ಪಾರದರ್ಶಕ ತನಿಖೆಯಾಗಲಿ ಎಂದು ಒತ್ತಾಯಿಸಿದ್ದಾರೆ.

><><><><><><><><><><

ರಾಜ್ಯದ ವಿವಿಧೆಡೆ ಲೋಕಾಯುಕ್ತ ಅಧಿಕಾರಿಗಳು ಹಿರಿಯ ಐಎಎಸ್ ಅಧಿಕಾರಿ ಹಾಗೂ ಸರ್ಕಾರಿ ನೌಕರರ ನಿವಾಸದ ಮೇಲೆ ದಾಳಿ ನಡೆಸಿದ್ದಾರೆ. ಬೆಂಗಳೂರು, ಮೈಸೂರು, ಕೊಪ್ಪಳ, ಹುಬ್ಬಳ್ಳಿ ಜಿಲ್ಲೆಗಳಲ್ಲಿ ದಾಳಿ ನಡೆಸಿ ಪರಿಶೀಲನೆ ನಡೆಸುತ್ತಿದ್ದಾರೆ. ಅಕ್ರಮ ಆಸ್ಥಿಗಳಿಸಿದ ಆರೋಪದ ಮೇಲೆ ಅಧಿಕಾರಿಗಳ ವಿರುದ್ಧ ದೂರು ಕೇಳಿಬಂದ ಹಿನ್ನೆಲೆಯಲ್ಲಿ ದಾಳಿ ನಡೆಸಲಾಗುತ್ತಿದೆ. ಈ ಹಿಂದೆ ಬೆಂಗಳೂರು ನಗರದ ವಿಶೇಷ ಉಪಆಯುಕ್ತರಾಗಿ ಸೇವೆ ಸಲ್ಲಿಸಿದ ಐಎಎಸ್ ಅಧಿಕಾರಿ ಸರ್ಕಾರಿ ಭೂಮಿಯನ್ನು ಖಾಸಗಿ ವ್ಯಕ್ತಿಗಳಿಗೆ ಅಕ್ರಮವಾಗಿ ವರ್ಗಾಯಿಸಿದ ಆರೋಪ ಎದುರಿಸುತ್ತಿದ್ದಾರೆ.

><><><><><><><><><><

ಬುಡಕಟ್ಟು ಸಮಾಜದ ಸಬಲೀಕರಣ ಮತ್ತು ಸಮಾಜದ ನಾಯಕರಲ್ಲಿ ಅರಿವು ಮೂಡಿಸಲು ಬೆಂಗಳೂರಿನಲ್ಲಿಂದು ಕೇಂದ್ರ ಬುಡಕಟ್ಟು ವ್ಯವಹಾರಗಳ ಸಚಿವಾಲಯ ನಾಲ್ಕು ದಿನಗಳ ಆದಿಕರ್ಮಯೋಗಿ ತರಬೇತಿ ಕಾರ್ಯಕ್ರಮ ಏರ್ಪಡಿಸಿತ್ತು. ಅರಣ್ಯ, ಶಿಕ್ಷಣ ಪಂಚಾಯತ್ ರಾಜ್ ಹಾಗೂ ಗ್ರಾಮೀಣಾಭಿವೃದ್ಧಿ ಇಲಾಖೆಗಳ ಸಿಬ್ಬಂದಿ ಸಹಯೋಗದೊಂದಿಗೆ ತರಬೇತಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ಉದ್ಘಾಟನಾ ಸಮಾರಂಭದಲ್ಲಿ ವರ್ಚುವಲ್ ಮೂಲಕ ಪಾಲ್ಗೊಂಡಿದ್ದ ಕೇಂದ್ರ ಬುಡಕಟ್ಟು ವ್ಯವಹಾರಗಳ ಸಚಿವಾಲಯದ ಕಾರ್ಯದರ್ಶಿ ವಿಭು ನಾಯರ್ ಮಾತನಾಡಿ, ಸಮಾಜದ ತಳಮಟ್ಟದಲ್ಲಿ ನಾಯಕತ್ವದ ಒಂದು ತಂಡವನ್ನು ತಯಾರಿಸಿ ಸರ್ಕಾಂದ ಕಾರ್ಯಕ್ರಮಗಳ ಕುರಿತು ಅರಿವು ಮೂಡಿಸಲು ಕೇಂದ್ರ ಸರ್ಕಾರ ಆದಿಕರ್ಮಯೋಗಿ ತರಬೇತಿ ಕಾರ್ಯಕ್ರಮವನ್ನು ದೇಶಾದ್ಯಂತ ಹಮ್ಮಿಕೊಂಡಿದೆ. ತಳಮಟ್ಟದ ಆಡಳಿತ ವ್ಯವಸ್ಥೆಯೊಂದಿಗೆ ಸಮಾಜದ ನಾಯಕರು ಉತ್ತಮ ಸಮನ್ವಯ ಹೊಂದಿದ್ದರೆ ಸರ್ಕಾರದ ಕಾರ್ಯಕ್ರಮಗಳ ಅನುಷ್ಠಾನ ಸುಲಭ ಸಾಧ್ಯವಾಗಲಿದೆ ಎಂದು ತಿಳಿಸಿದರು. ಆಡಳಿತ ಮತ್ತು ಸಮಾಜದ ನಾಯಕರ ಉತ್ತಮ ಸಮನ್ವಯದಿಂದ ಬುಡಕಟ್ಟು ಸಮಾಜಕ್ಕೆ ಅರಿವು ಮತ್ತು ಯೋಜನೆ ತಲುಪಲಿದೆ ಎಂದು ಅವರು ಅಭಿಪ್ರಾಯ ಪಟ್ಟರು.

><><><><><><><><><><

ಮಾವು ಬೆಳೆಗಾರರಿಗೆ ಬೆಂಬಲವಾಗಿ ೨೦೨೫-೨೬ರ ಸಾಲಿನಲ್ಲಿ ಮಾರುಕಟ್ಟೆ ಮಧ್ಯಸ್ಥಿಕೆ ಯೋಜನೆಯಡಿಯಲ್ಲಿ ಬೆಲೆ ಕೊರತೆ ಪಾವತಿ ಯೋಜನೆಯನ್ನು ಯಶಸ್ವಿಯಾಗಿ ಜಾರಿಗೊಳಿಸಿದ್ದಕ್ಕಾಗಿ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯಕ್ಕೆ ಕೃಷಿ ಸಚಿವ ಎನ್.

ಚಲುವರಾಯಸ್ವಾಮಿ ಕೃತಜ್ಞತೆ ಸಲ್ಲಿಸಿದ್ದಾರೆ. ಮಂಡ್ಯದಲ್ಲಿ ಮಾತನಾಡಿದ ಅವರು, ಈ ಯೋಜನೆಯು ರಾಜ್ಯದ ಮಾವು ಬೆಳೆಗಾರರಿಗೆ ಸಕಾಲಿಕ ಮತ್ತು ಅತ್ಯಗತ್ಯವಾದ ನೆರವು ಒದಗಿಸಿದೆ ಎಂದು ಹೇಳಿದ್ದಾರೆ. ಇದೇ ವೇಳೆ ರಾಜ್ಯದಲ್ಲಿ ರಸಗೊಬ್ಬರ ಕೊರತೆ ಇಲ್ಲ ಎಂದು ಸ್ಪಷ್ಟ ಪಡಿಸಿದ್ದಾರೆ.

**ಧ್ವನಿ : ಎನ್. ಚಲುವರಾಯಸ್ವಾಮಿ, ಕೃಷಿ ಸಚಿವ ( ೨೦ ಸೆಕೆಂಡುಗಳು)**

><><><><><><><><><><

ಕೋಲಾರ ಜಿಲ್ಲಾ ಮಾರ್ಗದರ್ಶಿ ಹಾಗೂ ಕರ್ನಾಟಕ ಗ್ರಾಮೀಣ ಬ್ಯಾಂಕ್ ಸಂಯುಕ್ತಾಶ್ರಯದಲ್ಲಿ ಮಾಲೂರು ತಾಲೂಕಿನ ಕೆ.ಜಿ.ಹಳ್ಳಿ ಗ್ರಾಮಪಂಚಾಯಿತಿಯಲ್ಲಿ ಕೇಂದ್ರ ಸರ್ಕಾರದ ಭದ್ರತಾ ಯೋಜನೆಗಳ ಜನಸುರಕ್ಷಾ ಅಭಿಯಾನಕ್ಕೆ ಗ್ರಾಮ ಪಂಚಾಯಿತಿ ಅಧ್ಯಕ್ಷ ಎಂ.ಮುರುಗೇಶ್ ಚಾಲನೆ ನೀಡಿದರು. ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ನ ಆರ್ಥಿಕ ಸಾಕ್ಷರತಾ ಸಲಹೆಗಾರ ನಾಗೇಂದ್ರಕುಮಾರ್ ಮಾತನಾಡಿ, ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸಹಯೋಗದೊಂದಿಗೆ ಲೀಡ್ ಬ್ಯಾಂಕ್ ಮತ್ತು ಗ್ರಾಮೀಣ ಬ್ಯಾಂಕುಗಳ ಮೂಲಕ ಸಾಮಾಜಿಕ ಭದ್ರತಾ ಯೋಜನೆಗಳು ಜಾರಿಗೊಳ್ಳುತ್ತಿವೆ. ಯಾವುದೇ ಬ್ಯಾಂಕಿನಲ್ಲಿ ಉಳಿತಾಯ ಖಾತೆ ಹೊಂದಿರುವ ಪ್ರತಿಯೊಬ್ಬ ನಾಗರಿಕನೂ ವಿಮಾ ಯೋಜನೆಯ ಲಾಭ ಪಡೆಯಬಹುದಾಗಿದೆ ಎಂದು ತಿಳಿಸಿದ್ದಾರೆ.

><><><><><><><><><><

ಉತ್ತರಕನ್ನಡ ಜಿಲ್ಲೆ ಕರಾವಳಿ ತಾಲೂಕುಗಳಾದ ಕಾರವಾರ, ಅಂಕೋಲಾ, ಕುಮಟಾ, ಹೊನ್ನಾವರ ಹಾಗೂ ಭಟ್ಕಳಗಳಲ್ಲಿ ನಿರಂತರ ಮಳೆ ಸುರಿಯುತ್ತಿದ್ದು, ಜನಜೀವನ ಅಸ್ತವ್ಯಸ್ತವಾಗಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಅಂಗನವಾಡಿ, ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯ ರಜೆ ಘೋಷಿಸಿದ್ದಾರೆ. ಕಳೆದ ೨೪ ಗಂಟೆಗಳಲ್ಲಿ ಕುಮಟಾದಲ್ಲಿ ಅತೀ ಹೆಚ್ಚು ೧೯೧.೮ ಮೀಲಿ ಮೀಟರ್ ಮಳೆ ಸುರಿದಿದೆ. ಭಾರತೀಯ ಹವಾಮಾನ ಇಲಾಖೆ ಜಿಲ್ಲೆಯಲ್ಲಿ ಇಂದು ಭಾರಿ ಮಳೆಯ ಮುನ್ಸೂಚನೆ ನೀಡಿದ್ದು, ಆರೆಂಜ್ ಅಲರ್ಟ ಸೂಚನೆ ನೀಡಿದೆ. ಸಾರ್ವಜನಿಕರು ಮುನ್ನೆಚ್ಚರಿಕೆ ವಹಿಸುವಂತೆ ಜಿಲ್ಲಾಡಳಿತ ಮನವಿ ಮಾಡಿದೆ.

><><><><><><><><><><